ಎಂ ವಿ ಸಿ ನಂಃ 539/2022
ಪಿ. ಡಬ್ಲ್ಯೂ-1

**(ಇಂದು ದಿನಾಂಕ 13-02-2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಮಾಡಿಸಲಾಯಿತು)**

**ಪಾಟೀಸವಾಲುಃ 2 ನೇ ಎದುರುದಾರರ ಪರ ಶ್ರೀಮತಿ ಎಸ್ ಎನ್ ಎ ವಕೀಲರಿಂದ**

ಅಪಘಾತದ ಸಮಯದಲ್ಲಿ ನನ್ನ ವಯಸ್ಸು 18 ವರ್ಷ ಇತ್ತು . ಆ ಸಮಯದಲ್ಲಿ ನಾನು ಮೊದಲನೇ ವರ್ಷದ ಪಿ.ಯು.ಸಿ ಅಭ್ಯಾಸ ಮಾಡುತ್ತಿದ್ದೆ . ಈ ಕುರಿತಾದ ದಾಖಲೆಗಳನ್ನು ನಾನು ಹಾಜರುಪಡಿಸಿದ್ದೇನೆ . ಅಪಘಾತದ ಸಮಯದಲ್ಲಿ ನಾನು ವಿದ್ಯಾಭ್ಯಾಸ ಮಾಡುತ್ತಿರಲಿಲ್ಲ ಕಾರಣ ಈ ಕುರಿತಾದ ದಾಖಲೆಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ . ನಾನು ಕಬ್ಬಡಿ , ವಾಲಿಬಾಲ್ , ರನ್ನಿಂಗ್ , ಖೋಖೋ ಇತ್ಯಾದಿ ಕ್ರಿಡಾ ಚಟುವಟಿಕೆಯಲ್ಲಿ ಭಾಗವಹಿಸುತ್ತಿದ್ದೆ . ಈ ಕುರಿತಾದ ದಾಖಲೆಗಳನ್ನು ನಾನು ಹಾಜರುಪಡಿಸಿದ್ದೇನೆ . ನಾನು ಕ್ರಿಡಾ ಚಟುವಟಿಕೆಯಲ್ಲಿ ಭಾಗವಹಿಸಿದ ಕುರಿತು ದಾಖಲೆ ಹಾಜರುಪಡಿಸದೇ ಇದ್ದರೂ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ .

ಅಪಘಾತದಲ್ಲಿ ನನಗೆ ಸಾದಾ ಸ್ವರೂಪದ ಗಾಯ ಆಗಿರುವ ಕಾರಣ ಸಿವಿಲ್ ಆಸ್ಪತ್ರೆ ಧಾರವಾಡ ಇವರು ಅದೇ ದಿನ ನನ್ನನ್ನು ಆಸ್ಪತ್ರೆಯಿಂದ ಬಿಡುಗಡೆ ಮಾಡಿದರು ಎಂದರೆ ಸರಿಯಲ್ಲ . ನಾನು ಸಿವಿಲ್ ಆಸ್ಪತ್ರೆಯಿಂದ ಬಿಡುಗಡೆ ಹೊಂದಿ ನಂತರ ಕಿಮ್ಸ ಆಸ್ಪತ್ರೆಗೆ ಹೋಗಿ ಒಳರೋಗಿಯಾಗಿ ದಾಖಲಾಗಿ ಚಿಕಿತ್ಸೆ ಪಡೆದಿರುವುದಾಗಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ . ವೈದ್ಯಕೀಯ ವೆಚ್ಚಕ್ಕಾಗಿ ಯಾವುದೇ ರೀತಿ ಹಣ ವ್ಯಯ ಮಾಡದೇ ಇದ್ದರೂ ಹೆಚ್ಚಿನ ಪರಿಹಾರ ಕೇಳುತ್ತಿದ್ದೇನೆ ಎಂದರೆ ಸರಿಯಲ್ಲ . ನಾನು ಶಸ್ತ್ರ ಚಿಕಿತ್ಸೆಗೆ ಒಳಗಾಗಿಲ್ಲ ಎಂದರೆ ಸರಿಯಲ್ಲ . ನಾನು ದಾಖಲೆಗಳನ್ನು ಸೃಷ್ಟಿಮಾಡಿಕೊಂಡು ತಂದು ಹಾಜರುಪಡಿಸಿ ಹೆಚ್ಚಿನ ಪರಿಹಾರ ಕೇಳುತ್ತಿದ್ದೇನೆ ಎಂದರೆ ಸರಿಯಲ್ಲ . ಅಪಘಾತದ

ಪರಿಣಾಮ ನನಗೆ ಯಾವುದೇ ಅಂಗನ್ಯೂನ್ಯತೆ ಉಂಟಾಗಿಲ್ಲ ನಾನು ಅಪಘಾತದ ಮೊದಲು ಯಾವ ರೀತಿ ಕೆಲಸ ಮಾಡುತ್ತಿದ್ದೆನೋ ಅದೇ ರೀತಿ ಈಗಲೂ ಸಹ ಕೆಲಸ ಮಾಡಲು ಸಮರ್ಥನಿದ್ದೆನೆ ಎಂದರೆ ಸರಿಯಲ್ಲ . ನಾನು ಯಾವುದೇ ಕ್ರಿಡಾ ಚಟುಬಟಿಕೆಯಲ್ಲಿ ಭಾಗವಹಿಸದ ಕಾರಣ ಅಪಘಾತದ ಪರಿಣಾಮ ಉಂಟಾಗಿರುವ ಗಾಯಗಳಿಂದ ನನ್ನ ಚಟು ವಟಿಕೆಗಳಿಗೆ ಯಾವುದೇ ಭಾದಕ ಉಂಟಾಗಿಲ್ಲ ಎಂದರೆ ಸರಿಯಲ್ಲ . ಅಪಘಾತದ ಪರಿಣಾಮ ಉಂಟಾದ ಗಾಯಗಳಿಂದ ನನ್ನ ಶೈಕ್ಷಣಿಕ ಪ್ರಗತಿಗೆ ಯಾವುದೇ ಅಡ್ಡಿ ಉಂಟಾಗಿಲ್ಲ ಎಂದರೆ ಸರಿಯಲ್ಲ .

**ಮರುವಿಚಾರಣೆ ಃ ಇಲ್ಲ .**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಅದೆ ,

ಪ್ರ ಹಿ ದಿ ನ್ಯಾ ಹಾಗೂ ಸಿಜೆಎಂ, ಧಾರವಾಡ.